**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 7ನೇ ರಾಜ್ಯ ವೇತನ ಆಯೋಗವನ್ನು ರಚಿಸುವ ಬಗ್ಗೆ.

ಓದಲಾಗಿದೆ: ದಿನಾಂಕ: 01-06-2017ರ ಸರ್ಕಾರಿ ಆದೇಶ ಸಂಖ್ಯೆ: ಆಇ 22 ಎಸ್‌ಆರ್‌ಪಿ 2017.

---

**ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್‌ಆರ್‌ಪಿ 2022**

**ಬೆಂಗಳೂರು, ದಿನಾಂಕ 19ನೇ ನವೆಂಬರ್ 2022**

ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಲು ವೇತನ ಆಯೋಗವನ್ನು ರಚಿಸುವ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳು ಘೋಷಿಸಿರುತ್ತಾರೆ.

2. ಘೋಷಣೆಯ ಅನುಸಾರ ರಾಜ್ಯ ಸರ್ಕಾರವು ಈ ಕೆಳಕಂಡ ಸದಸ್ಯರನ್ನೊಳಗೊಂಡ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಲು ಸರ್ಕಾರವು ಹರ್ಷಿಸುತ್ತದೆ:

| | |
|---|---|
| (1) ಶ್ರೀ ಸುಧಾಕರ್ ರಾವ್, ಭಾ.ಆ.ಸೇ. (ನಿ) | ಅಧ್ಯಕ್ಷರು |
| (2) ಶ್ರೀ ಪಿ.ಬಿ.ರಾಮಮೂರ್ತಿ, ಭಾ.ಆ.ಸೇ. (ನಿ) | ಸದಸ್ಯರು |
| (3) ಶ್ರೀ ಶ್ರೀಕಾಂತ್ ಬಿ.ವನಹಳ್ಳಿ,<br>ಪ್ರಧಾನ ನಿರ್ದೇಶಕರು (ನಿ), ರಾಜ್ಯ ಲೆಕ್ಕಪತ್ರ ಇಲಾಖೆ | ಸದಸ್ಯರು |
| (4) ಶ್ರೀಮತಿ ಹೆಫ್ಸಿಬಾ ರಾಣಿ ಕೊರ್ಲಪಾಟಿ, ಭಾ.ಆ.ಸೇ.<br>ಜಂಟಿ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ | ಕಾರ್ಯದರ್ಶಿ |

3. ವೇತನ ಆಯೋಗದ ಪರಿಶೀಲನಾರ್ಹ ಅಂಶಗಳು ಈ ಕೆಳಕಂಡಂತಿವೆ:-

(ಎ) ರಾಜ್ಯ ಸರ್ಕಾರಿ ನೌಕರರ (ಯುಜಿಸಿ/ಎಐಸಿಟಿಇ/ಐಸಿಎಆರ್/ಎನ್‌ಜೆಪಿಸಿ ವೇತನ ಶ್ರೇಣಿ ಹೊಂದಿರುವವರನ್ನು ಹೊರತುಪಡಿಸಿ), ಅನುದಾನಿತ ಶಿಕ್ಷಣ ಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳು, ವಿಶ್ವವಿದ್ಯಾನಿಲಯಗಳು ಮತ್ತು ಕಾಲೇಜುಗಳ ಬೋಧಕೇತರ ಸಿಬ್ಬಂದಿಗಳಿಗೆ ಮರಣ ಹಾಗೂ ನಿವೃತ್ತಿ ಉಪದಾನ ಸೌಲಭ್ಯಗಳನ್ನೊಳಗೊಂಡಂತೆ ಲಭ್ಯವಿರುವ ಎಲ್ಲಾ ಕ್ರೋಢೀಕೃತ ಸೌಲಭ್ಯಗಳನ್ನು

ಗಣನೆಗೆ ತೆಗೆದುಕೊಂಡು, ಈ ಸಿಬ್ಬಂದಿಗಳ ಪ್ರಸ್ತುತ ವೇತನ ರಚನೆಯನ್ನು ಪರಿಶೀಲಿಸುವುದು ಹಾಗೂ ಅಪೇಕ್ಷಣೀಯವಾದ ಹಾಗೂ ಕಾರ್ಯಸಾಧ್ಯವಿರುವ ನೂತನ ವೇತನ ರಚನೆಯನ್ನು ರೂಪಿಸುವುದು.

(ಬಿ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ವೃಂದದ ಹುದ್ದೆಗಳನ್ನು ಸಮೀಕರಿಸಿ ಕೇಂದ್ರ ಸರ್ಕಾರದ ವೇತನ ರಚನೆಯನ್ನು ಅಳವಡಿಸಿಕೊಳ್ಳುವ ಕಾರ್ಯಸಾಧ್ಯತೆಗಳನ್ನು ಪರಿಶೀಲಿಸುವುದು.

(ಸಿ) ರಾಜ್ಯ ಸರ್ಕಾರವು ಅಳವಡಿಸಿಕೊಳ್ಳಬಹುದಾದ ತುಟ್ಟಿಭತ್ಯೆಯ ಸೂತ್ರವನ್ನು ನಿರ್ಧರಿಸಿ ಪರಿಶೀಲಿಸುವುದು.

(ಡಿ) ಮನೆ ಬಾಡಿಗೆ ಭತ್ಯೆ ಮತ್ತು ನಗರ ಪರಿಹಾರ ಭತ್ಯೆ, ವಿಶೇಷ ಭತ್ಯೆಗಳು ಇತ್ಯಾದಿ ಮತ್ತು ರಜೆ ಪ್ರಯಾಣ ರಿಯಾಯಿತಿ ಮತ್ತು ವೈದ್ಯಕೀಯ ಮರುಪಾವತಿ ಸೌಲಭ್ಯಗಳನ್ನೊಳಗೊಂಡಂತೆ ವಿವಿಧ ಭತ್ಯೆಗಳ ಪ್ರಮಾಣವನ್ನು ಪರಿಶೀಲಿಸುವುದು ಹಾಗೂ ಅಪೇಕ್ಷಣೀಯವಾದ ಹಾಗೂ ಕಾರ್ಯಸಾಧ್ಯವಿರುವ ಬದಲಾವಣೆಗಳನ್ನು ಸಲಹೆ ಮಾಡುವುದು.

(ಇ) ನಿವೃತ್ತಿ ವೇತನ ಮತ್ತು ನಿವೃತ್ತಿ ಸೌಲಭ್ಯಗಳನ್ನು ಪರಿಶೀಲಿಸುವುದು.

(ಎಫ್)ರಾಜ್ಯ ಸರ್ಕಾರದಿಂದ ವಹಿಸಲ್ಪಡುವ/ಸೂಚಿಸಬಹುದಾದ ಇತರೆ ವಿಷಯಗಳನ್ನು ಪರಿಶೀಲಿಸುವುದು.

4. ಆಯೋಗವು ತನ್ನ ಶಿಫಾರಸ್ಸುಗಳನ್ನು ಮಾಡುವಲ್ಲಿ, ರಾಜ್ಯ ಸಂಪನ್ಮೂಲಗಳು ಹಾಗೂ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ಯೋಜನೆಗಳ ಕುರಿತಾಗಿ ರಾಜ್ಯ ಸರ್ಕಾರದ ಹೊಣೆಗಳು, ಶಾಸನಬದ್ಧ ಹಾಗೂ ಕ್ರಮಬದ್ಧ ಕಾರ್ಯಗಳು, ಋಣಸೇವಾ ನಿರ್ವಹಣೆಗಳು ಮತ್ತು ಇತರೆ ಅಭಿವೃದ್ಧಿಯೇತರ ಅಗತ್ಯಗಳನ್ನು ಹಾಗೂ ವಿತ್ತೀಯ ಹೊಣೆಗಾರಿಕೆ ನಿರ್ವಹಣೆ ಅಧಿನಿಯಮ, 2002ರ ಅಧ್ಯಾದೇಶದ ಅವಕಾಶಗಳ ಪರಿಮಿತಿಯನ್ನು ಗಮನದಲ್ಲಿರಿಸಿಕೊಳ್ಳುವುದು.

5. ಆಯೋಗವು ತನ್ನದೇ ಆದ ಕಾರ್ಯವಿಧಾನಗಳನ್ನು ರೂಪಿಸಿಕೊಳ್ಳುವುದು ಹಾಗೂ ಪರಿಶೀಲನಾರ್ಹ ಅಂಶಗಳಿಗೆ ಅಗತ್ಯವೆನಿಸಿದ ಮಾಹಿತಿಗಳನ್ನು ವಿವಿಧ ಇಲಾಖೆಗಳಿಂದ ಪಡೆಯಬಹುದಾಗಿರುತ್ತದೆ.

6. ಸರ್ಕಾರದ ಎಲ್ಲಾ ಇಲಾಖೆಗಳು ಆಯೋಗವು ಅಪೇಕ್ಷಿಸುವ ಎಲ್ಲಾ ಮಾಹಿತಿ, ದಾಖಲೆ ಹಾಗೂ ಇನ್ನಿತರೆ ಸಹಕಾರವನ್ನು ಒದಗಿಸತಕ್ಕದ್ದು. ಎಲ್ಲಾ ಸೇವಾ ಸಂಘಟನೆಗಳು, ಸ್ಥಳೀಯ ಸಂಸ್ಥೆಗಳು, ಅನುದಾನಿತ ಸಂಸ್ಥೆಗಳು ಮತ್ತು ಇತರೆ ಸಂಬಂಧಪಟ್ಟವರು ಆಯೋಗಕ್ಕೆ ಅವುಗಳ ಸಂಪೂರ್ಣ ಸಹಕಾರ ಮತ್ತು ನೆರವನ್ನು ನೀಡುತ್ತವೆ ಎಂದು ಸರ್ಕಾರವು ಭಾವಿಸುತ್ತದೆ.

7. ವೇತನ ಆಯೋಗವು ತನ್ನ ವರದಿಯನ್ನು ಆರು ತಿಂಗಳೊಳಗೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Jayashree
(ಜಯಶ್ರೀ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398), ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಗೌರವಾನ್ವಿತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
7. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.

10. ಎಲ್ಲಾ ಪ್ರಾದೇಶಿಕ ಆಯುಕ್ತರು.
11. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
13. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
15. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
16. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
17. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
18. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
19. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
20. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
22. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
23. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
24. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
25. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.karnataka.gov.in ವೀಕ್ಷಿಸಿ.**